- 9ನೇ ಅಡ್ಡರಸ್ತೆಯಲ್ಲಿ ಗಾರ್‌ಬೇಜ್ ಪಾಯಿಂಟ್‌ಗಳನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಕೋರಲಾಯಿತು.
- 24ನೇ ಮುಖ್ಯರಸ್ತೆ, 9ನೇ ಅಡ್ಡರಸ್ತೆ ಪಾದಚಾರಿ ಮಾರ್ಗವನ್ನು ದುರಸ್ಥಿಪಡಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಕೋರಲಾಯಿತು.
- ನೋಡಲ್ ಅಧಿಕಾರಿಗಳು ನಡೆಸುವ ವಾರ್ಡ್ ಸಮಿತಿ ಸಭೆ ಬಗ್ಗೆ JPNCCA ರವರಿಗೆ ತಿಳಿಸುತ್ತಿಲ್ಲವೆಂದು ದೂರಿರುವ ಬಗ್ಗೆ ಚರ್ಚಿಸಲಾಯಿತು.

- ಮೇಲ್ಕಂಡ ಎಲ್ಲಾ ದೂರುಗಳ ಬಗ್ಗೆ ಚರ್ಚಿಸಲಾಗಿ, ಆಯಾ ದೂರುಗಳ ಸಂಬಂಧಪಟ್ಟ ಅಧಿಕಾರಿಗಳಿಗೆ ಕ್ರಮ ಕೈಗೊಳ್ಳಲು ಸೂಚಿಸಲಾಗಿ, ಮುಂದಿನ ವಾರ್ಡ್ ಸಮಿತಿ ಸಭೆಯಲ್ಲಿ ದೂರುಗಳ ಬಗ್ಗೆ ಕ್ರಮ ಕೈಗೊಂಡ ಅನುಪಾಲನಾ ವರದಿಯನ್ನು ನೀಡಲು ಸೂಚಿಸಲಾಯಿತು.

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 11.00 ಘಂಟೆಗೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಸಕಾಲದಲ್ಲಿ ಹಾಜರಾಗುವಂತೆ ಹಾಗೂ ಈ ಸಭೆಯಲ್ಲಿ ತಿಳಿಸಿರುವ ಸಮಸ್ಯೆಗಳನ್ನು ಬಗೆಹರಿಸಲು ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರವರು ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| **ಸದಸ್ಯ ಕಾರ್ಯದರ್ಶಿ** | **ಅಧ್ಯಕ್ಷರು** |
| **ಹಾಗೂ ಸಹಾಯಕ ಅಭಿಯಂತರರು** | **ವಾರ್ಡ್ ಸಮಿತಿ, ವಾರ್ಡ್ ನಂ. 177** |
| **ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ** | **ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ** |

**ದಿನಾಂಕ: 20.11.2021 ರಂದು 11-30 ಕ್ಕೆ ಶ್ರೀ ಹೆಚ್. ನಾಗರಾಜಪ್ಪ, ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-177 (ಜೆ.ಪಿ.ನಗರ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾರ್ಡ್-177ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್-19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

## : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| **ಅಧ್ಯಕ್ಷರು** | ನೋಡಲ್ ಅಧಿಕಾರಿ |
| **ಸದಸ್ಯ ಕಾರ್ಯದರ್ಶಿ** | ವಾರ್ಡ್ 177ರ ಸಹಾಯಕ ಅಭಿಯಂತರರು |
| **ಸದಸ್ಯರುಗಳು** | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| **ಸದಸ್ಯರುಗಳು** | ಬಿಡಬ್ಲ್ಯೂಎಸ್ಎಸ್‌ಬಿ ಅಭಿಯಂತರರು |
| **ಸದಸ್ಯರುಗಳು** | ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು |
| **ಸದಸ್ಯರುಗಳು** | ತೋಟಗಾರಿಕೆ ಅಧಿಕಾರಿ (Horti. Inspector) |
| **ಸದಸ್ಯರುಗಳು** | ಠಾಣಾಧಿಕಾರಿಗಳು, ನ್ಯಾಯ ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ |
| **ಸದಸ್ಯರುಗಳು** | ಕಂದಾಯ ಪರಿವೀಕ್ಷಕರು, ವಾರ್ಡ್ 177 |
| **ಸದಸ್ಯರುಗಳು** | ಅರಣ್ಯ ಸಂರಕ್ಷಣಾಧಿಕಾರಿಗಳು |
| **ಸದಸ್ಯರುಗಳು** | ಬೆಸ್ಕಾಂ ಅಧಿಕಾರಿಗಳು |

## :ನಡಾವಳಿಯ ವರದಿ:

- ಅಧ್ಯಕ್ಷರು ಮಾತನಾಡುತ್ತಾ ಹಿಂದಿನ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

- ಜೆ.ಪಿ.ನಗರ ವ್ಯಾಪ್ತಿಯ ಸುತ್ತಮುತ್ತಲಿನ ಪ್ರದೇಶಗಳಲ್ಲಿರುವ ಚರಂಡಿಯಲ್ಲಿ ಮಳೆ ನೀರು ಸರಾಗವಾಗಿ ಹರಿದುಹೋಗದೆ ನೀರು ದುರ್ಗಂಧವನ್ನು ಚೆಲ್ಲುತ್ತಿರುವುದಾಗಿ ಸಂಬಂಧಪಟ್ಟ ಇಲಾಖೆಯಿಂದ ತೆರವುಗೊಳಿಸುವಂತೆ ಚರ್ಚಿಸಲಾಯಿತು.
- ಟೆಲಿಫೋನ್ ಬೋರ್ಡ್‌ನ ಹತ್ತಿರ ಕಸ ಮತ್ತು ಹಳಸಿದ ಪದಾರ್ಥಗಳನ್ನು ತಂದು ಸುರಿಯುತ್ತಿರುವುದಾಗಿ ದೂರಿರುವ ಬಗ್ಗೆ.
- ಇತ್ತೀಚೆಗೆ ಬಿದ್ದ ಭಾರಿ ಮಳೆಯಿಂದಾಗಿ ಜೆ.ಪಿ.ನಗರ ಸುತ್ತಮುತ್ತಲಿನ ರಸ್ತೆಗಳು ಬಿದ್ದಿರುವುದಾಗಿ ಚರ್ಚಿಸಲಾಯಿತು.
- ರಸ್ತೆ ಅಗೆತವನ್ನು ಮಾಡಿದರೆ ಸರಿಯಾಗಿ ಮುಚ್ಚಿರುವುದಿಲ್ಲವೆಂದು ದೂರಿರುವ ಬಗ್ಗೆ.

ಪು.ತಿ.ನೋ